# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ: ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ ಕೃಷಿ ಕುರಿತು ತರಬೇತಿ ಬಗ್ಗೆ.**

**ಸರ್ಕಾರದ ಆದೇಶ ಸಂಖ್ಯೆ: ಕೃಇ/50/ಕೃಇಕ/2013 (ಭಾಗ-1), ಬೆಂಗಳೂರು, ದಿನಾಂಕ: 17.09.2013.**

ಓದಲಾಗಿದೆ:

1. 2013-14ನೇ ಸಾಲಿನ ಪರಿಷ್ಕೃತ ಆಯವ್ಯಯ ಭಾಷಣ ಕಂಡಿಕೆ-60.
2. ಕೃಷಿ ಆಯುಕ್ತರ ಪ್ರಸ್ತಾವನೆ ಸಂಖ್ಯೆ: ಪಿಎಲ್ಎನ್/ತಾಂ-1/ಆಯವ್ಯಯ ಕಂಡಿಕೆ/2013-14, ದಿ:07-08-2013.

ಮೇಲೆ ಓದಲಾದ (1) ರಲ್ಲಿ ದಿನಾಂಕ: 12.07.2013 ರಂದು ಮಾನ್ಯ ಮುಖ್ಯಮಂತ್ರಿಯವರು ಮಂಡಿಸಿರುವ 2013-14ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 60 ರಲ್ಲಿ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ ಕೃಷಿಯನ್ನು ಸಹ ಒಂದು ಪರಿಣಿತ ವಿಷಯವನ್ನಾಗಿ ಪರಿಗಣಿಸಿ ಕೃಷಿ ಯಂತ್ರೋಪಕರಣ, ಸಂಸ್ಕರಣಾ ಘಟಕಗಳು, ಹನಿ / ತುಂತುರು ನೀರಾವರಿ ಉಪಕರಣಗಳು ಇತ್ಯಾದಿಗಳ ಬಗ್ಗೆ ತರಬೇತಿ ನೀಡುವ ಬಗ್ಗೆ ಪರಿಶೀಲಿಸಲಾಗುವುದು ಎಂದು ಘೋಷಿಸಲಾಗಿದೆ.

ಮೇಲೆ ಓದಲಾದ (2)ರಲ್ಲಿ ಕೃಷಿ ಆಯುಕ್ತರು, 2013-14ನೇ ಸಾಲಿನಿಂದ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ ಕೃಷಿ ಕುರಿತು ತರಬೇತಿ ಯೋಜನೆಯ ಪ್ರಸ್ತಾವನೆಗೆ ಮಂಜೂರಾತಿ ಆದೇಶವನ್ನು ಹೊರಡಿಸುವಂತೆ ಕೋರಿ ಕೆಳಕಂಡಂತೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಕೈಗಾರಿಕಾ ತರಬೇತಿ ಸಂಸ್ಥೆಗಳ ಅಭ್ಯರ್ಥಿಗಳಿಗೆ ಕೃಷಿ ಯಂತ್ರೋಪಕರಣಗಳ ಅಳವಡಿಕೆ, ಬಳಕೆ ಮತ್ತು ನಿರ್ವಹಣೆ ಕುರಿತು ಕೌಶಲ್ಯ ತರಬೇತಿ ನಿರುದ್ಯೋಗಿ ಯುವಕರಿಗೆ ಕೌಶಲ್ಯಾಧಾರಿತ ಉದ್ಯೋಗಾವಕಾಶ ಕಲ್ಪಿಸುವುದು ಈ ಯೋಜನೆಯ ಉದ್ದೇಶ ಹಾಗೂ ಗುರಿಯಾಗಿರುತ್ತದೆ.

ಆಧುನಿಕ ಕೃಷಿ ಯಂತ್ರೋಪಕರಣಗಳ ಅಳವಡಿಕೆ, ಬಳಕೆ ಮತ್ತು ನಿರ್ವಹಣೆ ಕುರಿತು ಅಂದರೆ ಟ್ರಾಕ್ಟರ್, ಪವರ್ ಟಿಲ್ಲರ್, ಟ್ರಾಕ್ಟರ್ ಚಾಲಿತ ಉಪಕರಣಗಳು, ಹನಿ/ತುಂತುರು ನೀರಾವರಿ ಉಪಕರಣಗಳು, ಬೆಳೆ ಉತ್ಪಾದನೆ ಉಪಕರಣಗಳು, ಮತ್ತು ಕೃಷಿ ಸಂಸ್ಕರಣೆ ಉಪಕರಣಗಳ ಬಗ್ಗೆ ಕೌಶಲ್ಯ ತರಬೇತಿ ನೀಡುವ ಅವಶ್ಯಕತೆ ಇರುತ್ತದೆ.

ವ್ಯಕ್ತಿಯ ಮನೋಭಾವನೆ ಬದಲಾಯಿಸಲು, ವೃತ್ತಿ ಸಾಮರ್ಥ್ಯ ಮತ್ತು ಆರ್ಥಿಕ ಮಟ್ಟವನ್ನು ಹೆಚ್ಚಿಸುವಲ್ಲಿ ತರಬೇತಿಯು ಅನಿವಾರ್ಯ. ಸದ್ಯದ ಪರಿಸ್ಥಿತಿಯಲ್ಲಿ ರೈತ ಕುಟುಂಬವು ಉತ್ಪಾದನೆಯಲ್ಲಿ ಲಾಭ ಮತ್ತು ಸುಸ್ಥಿರತೆಯನ್ನು ಕಾಯ್ದುಕೊಳ್ಳಬೇಕಾದರೆ ಆಧುನಿಕ ಪರಿಣಾಮಕಾರಿಯಾದ ಕೌಶಲ್ಯ ತರಬೇತಿಗಳ ಅವಶ್ಯಕತೆ ಇದೆ. ರಾಜ್ಯದ ನಿರುದ್ಯೋಗ ಸಮಸ್ಯೆ ನಿವಾರಣೆಯಾಗಬೇಕಾದರೆ ಕೃಷಿಗೆ ನೀಡುವ ಆದ್ಯತೆಯನ್ನು ಕೈಗಾರಿಕೀಕರಣಕ್ಕೂ ನೀಡಬೇಕಾದಿದೆ.

- ಗ್ರಾಮೀಣ ಯುವಕರು ನಗರಗಳಿಗೆ ವಲಸೆ ಹೋಗುತ್ತಿರುವ ಹಿನ್ನೆಲೆಯಲ್ಲಿ ರೈತ ಕಾರ್ಮಿಕರ ಕೊರತೆ ಕಂಡುಬರುತ್ತಿದೆ. ಕಾರಣ, ರೈತರು ಮುಖ್ಯವಾದ ಬೇಸಾಯ ಚಟುವಟಿಕೆಗಳಿಗೆ ಯಾಂತ್ರೀಕರಣದ ಮೇಲೆ ಅವಲಂಬಿತರಾಗಿರುತ್ತಾರೆ.
- ದಿನೇ ದಿನೇ ನೀರಿನ ಅಂತರ್ಜಲ ಮಟ್ಟ ಕುಸಿಯುತ್ತಿದ್ದು, ಅಂತರ್ಜಲ ಕೊರತೆ ನೀಗಿಸಲು ಮತ್ತು ಸಮರ್ಪಕ ನೀರಿನ ಬಳಕೆಗಾಗಿ ಹನಿ/ ತುಂತುರು ನೀರಾವರಿ ಉಪಕರಣಗಳಿಗೆ ಹೆಚ್ಚಿನ ಒತ್ತು ನೀಡಲಾಗುತ್ತಿದೆ.
- ಕೊಯ್ಲಿನೋತ್ತರ ತಂತ್ರಜ್ಞಾನದಿಂದ ಬೆಳೆಗಳ ಮೌಲ್ಯ ಹೆಚ್ಚಿಸಿ ಮಾರುಕಟ್ಟೆಯಲ್ಲಿ ಉತ್ತಮ ಬೇಡಿಕೆಗೆ ಅವಕಾಶವಿರುವುದರಿಂದ ಸಂಸ್ಕರಣಾ ಘಟಕಗಳ ಪರಿಚಯ ಮಾಡಲಾಗುತ್ತಿದೆ.
- ಗ್ರಾಮೀಣ ಮಕ್ಕಳು ವಿಶೇಷವಾಗಿ ಕೌಶಲ್ಯಾಧಾರಿತ ಅಲ್ಪಾವಧಿ ತರಬೇತಿಗಳನ್ನು ಹೊಂದಲು ಇಚ್ಛಿಸುತ್ತಾರೆ, ಕಾರಣ ಸದರಿ ಯೋಜನೆಯನ್ನು ಅನುಷ್ಠಾನ ಮಾಡಬಹುದಾಗಿದೆ.

- ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ ಕೃಷಿ ಸಂಬಂಧಿತ ಪಠ್ಯಕ್ರಮ / ಅಲ್ಪಾವಧಿ ತರಬೇತಿ ಆರಂಭಿಸುವುದರಿಂದ ರೈತರಿಗೆ ಸ್ಥಳೀಯವಾಗಿ ತರಬೇತಿ ಪಡೆದ ತಂತ್ರಜ್ಞರ ನೆರವು ದೊರೆಯುವುದಲ್ಲದೇ ಉದ್ಯೋಗ ಸೃಷ್ಟಿಯು ಸಾಧ್ಯವಾಗುತ್ತದೆ.

ಸದರಿ ಕಾರ್ಯಕ್ರಮಕ್ಕೆ ಬೇಕಾದ ಪಠ್ಯಕ್ರಮವನ್ನು ಕೃಷಿ ವಿಶ್ವವಿದ್ಯಾಲಯಗಳು, ಕೈಗಾರಿಕಾ ತರಬೇತಿ ಸಂಸ್ಥೆಗಳ ಸಹಯೋಗದೊಂದಿಗೆ ರೂಪಿಸುವುದು. ಕಾರ್ಮಿಕ ಇಲಾಖೆಯು ಸದರಿ ಯೋಜನೆಯನ್ನು ರೂಪಿಸಿ ಅನುಷ್ಠಾನಗೊಳಿಸುವ ಇಲಾಖೆಯಾಗಿರುತ್ತದೆಂದು ತಿಳಿಸಿದೆ.

ಕೃಷಿ ಆಯುಕ್ತರು ಸಲ್ಲಿಸಿರುವ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕುಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

## ಆದೇಶ

ಪ್ರಸ್ತಾವನೆಯಲ್ಲಿ ವಿವರಿಸಿದ ಕಾರಣಗಳ ಹಿನ್ನಲೆಯಲ್ಲಿ, 2013-14ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-60 ರಡಿ ಘೋಷಣೆಯಾಗಿರುವ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ ಕೃಷಿಯನ್ನು ಸಹ ಒಂದು ಪರಿಣತ ವಿಷಯವನ್ನಾಗಿ ಪರಿಗಣಿಸಿ ಕೃಷಿ ಯಂತ್ರೋಪಕರಣ, ಸಂಸ್ಕರಣಾ ಘಟಕಗಳು, ಹನಿ / ತುಂತುರು ನೀರಾವರಿ ಉಪಕರಣಗಳ ಅಳವಡಿಕೆ, ಬಳಕೆ ಮತ್ತು ನಿರ್ವಹಣೆ, ಕೃಷಿ ಹಾಗೂ ಕೃಷಿ ಸಂಬಂಧಿತ ವಿಷಯ ಇತ್ಯಾದಿಗಳ ಬಗ್ಗೆ ಸ್ಥಳೀಯ ಅವಶ್ಯಕತೆಯ ಅನುಗುಣವಾಗಿ ಪ್ರಮಾಣ ಪತ್ರಗಳನ್ನು / ತ್ವರಿತ ಪರಿಣಾಮಕಾರಿ ಕಲಿಕೆಯನ್ನು ನೀಡುವಂತಹ ತರಬೇತಿಯನ್ನು ಸರ್ಕಾರಿ / ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಗಳು ಮತ್ತು ಅಥವಾ ಕೃಷಿ ವಿಶ್ವವಿದ್ಯಾನಿಲಯಗಳು ಯೋಜನೆಯನ್ನು ಅನುಷ್ಠಾನಗೊಳಿಸಲು ತಾತ್ವಿಕ ಅನುಮೋದನೆ ನೀಡಲಾಗಿದೆ.

ಈ ಯೋಜನೆಗೆ ಸಂಬಂಧಿಸಿದ ವೆಚ್ಚವನ್ನು ಕಾರ್ಮಿಕ ಇಲಾಖೆ ಮತ್ತು ಅಥವಾ ಕೃಷಿ ವಿಶ್ವವಿದ್ಯಾಲಯಗಳ ಪ್ರಸ್ತಾವನೆಯನ್ವಯ ಕೃಷಿ ಇಲಾಖೆಯು ಆಯಾ ಸಂಸ್ಥೆಗಳಿಗೆ ಅನುದಾನ ಬಿಡುಗಡೆಗೊಳಿಸುವುದು. ಕರ್ನಾಟಕ ರಾಜ್ಯ ಕೃಷಿ ಮಿಷನ್ ಅಧ್ಯಕ್ಷರು ಕೃಷಿ, ವಿಶ್ವವಿದ್ಯಾಲಯಗಳು, ಕರ್ನಾಟಕ ರಾಜ್ಯ ಕೃಷಿ ಉತ್ಪನ್ನಗಳ ಸಂಸ್ಕರಣಾ ಹಾಗೂ ರಫ್ತು ನಿಗಮ ನಿಯಮಿತ ಮತ್ತು ಕಾರ್ಮಿಕ ಇಲಾಖೆಯೊಡನೆ ಸಮಾಲೋಚಿಸಿ ಪಠ್ಯಕ್ರಮ ರೂಪಿಸಿ ಕಾರ್ಯಕ್ರಮ ಅನುಷ್ಠಾನಕ್ಕೆಗೊಳಿಸತಕ್ಕದ್ದು.

ಸದರಿ ಯೋಜನೆಯನ್ನು ರೂಪಿಸಿ ಅನುಷ್ಠಾನಗೊಳಿಸುವ ಜವಾಬ್ದಾರಿಯು ಕಾರ್ಮಿಕ ಇಲಾಖೆಯದ್ದಾಗಿರುತ್ತದೆ.

ಈ ಯೋಜನೆಗೆ ತಗಲುವ ವೆಚ್ಚವನ್ನು ಬೇಸಾಯ ಸಂಬಂಧಿತ ಚಟುವಟಿಕೆಗಳು ಯೋಜನೆಯ ಲೆಕ್ಕ ಶೀರ್ಷಿಕೆ 2401-00-109-0-21 ಇತರೆ ವೆಚ್ಚಗಳು ಉಪ ಲೆಕ್ಕ ಶೀರ್ಷಿಕೆ (059) ರಡಿ ಭರಿಸತಕ್ಕದ್ದು.

ಈ ಆದೇಶವನ್ನು ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಪಿಡಿ/42/ಪಿಎಫ್‌ಟಿ/2013, ದಿ: 17/08/2013 ರ ಸಹಮತಿಯ ಮೇರೆಗೆ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಜಿ.ಆರ್. ವಿಶ್ವನಾಥಾಚಾರ್),
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ (ಯೋಜನೆ).

ಇವರಿಗೆ:-

1) ಪ್ರಧಾನ ಮಹಾಲೇಖಪಾಲರು (ಆ&ಇ), ಕರ್ನಾಟಕ, ಬೆಂಗಳೂರು.
2) ಸರ್ಕಾರದ ಕಾರ್ಯದರ್ಶಿ, ಕಾರ್ಮಿಕ ಇಲಾಖೆ, ವಿಕಾಸ ಸೌಧ, ಬೆಂಗಳೂರು.

3) ಸರ್ಕಾರದ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಆಡಳಿತ ಸುಧಾರಣೆ ಮತ್ತು ರಾಜಕೀಯ ವಿಶ್ರಾಂತಿ ವೇತನ) ಬೆಂಗಳೂರು.
4) ಆಯುಕ್ತರು/ನಿರ್ದೇಶಕರು, ಕೃಷಿ ಇಲಾಖೆ, ಬೆಂಗಳೂರು.
5) ನಿರ್ದೇಶಕರು, ಖಜಾನೆ ಇಲಾಖೆ, ವಿಶ್ವೇಶ್ವರಯ್ಯ ಕೇಂದ್ರ, ಬೆಂಗಳೂರು.
6) ನಿರ್ದೇಶಕರು, ಪರಿಯೋಜನಾ ರಚನಾ ವಿಭಾಗ, ಯೋಜನಾ ಇಲಾಖೆ, ಬೆಂಗಳೂರು.
7) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಕೃಷಿ ಉತ್ಪನ್ನಗಳ ಸಂಸ್ಕರಣಾ ಹಾಗೂ ರಫ್ತು ನಿಗಮ ನಿಯಮಿತ, ನಂ. 17, ರಿಚ್‌ಮಂಡ್ ರಸ್ತೆ, ಬೆಂಗಳೂರು.
8) ಕುಲಪತಿಗಳು, ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು / ಧಾರವಾಡ / ರಾಯಚೂರು ಮತ್ತು ವಿಶೇಷಾಧಿಕಾರಿಗಳು, ಕೃಷಿ ಮತ್ತು ತೋಟಗಾರಿಕಾ ವಿಶ್ವವಿದ್ಯಾಲಯ, ಶಿವಮೊಗ್ಗ-577204.
9) ಸರ್ಕಾರದ ಉಪ ಕಾರ್ಯದರ್ಶಿ-1, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
10) ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು.
11) ಜಂಟಿ ನಿರ್ದೇಶಕರು, ಹುಜೂರು ಖಜಾನೆ, ಬೆಂಗಳೂರು.
12) ಸರ್ಕಾರಧ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, (ವೆಚ್ಚ-4), ವಿಧಾನ ಸೌಧ, ಬೆಂಗಳೂರು.
13) ಸರ್ಕಾರದ ಅಧೀನ ಕಾರ್ಯದರ್ಶಿ, ಕೃಷಿ ಇಲಾಖೆ (ಕೃಷಿ ಸೇವೆ).
14) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಕೃಷಿ ಇಲಾಖೆ, ಬೆಂಗಳೂರು.
15) ಸರ್ಕಾರದ ಉಪ ಕಾರ್ಯದರ್ಶಿ-1ರವರ ಆಪ್ತ ಸಹಾಯಕರು, ಇಲಾಖೆ, ಬೆಂಗಳೂರು.
16) ಶಾಖಾಧಿಕಾರಿ, ಕೃಷಿ ಯೋಜನಾ ಘಟಕ, ಎ ಮತ್ತು ಬಿ, ಕೃಷಿ ಇಲಾಖೆ.
17) ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.

ಬಿಎಲ್‌ಎನ್ (ಲಾಂ-1/ಅನುಷ್ಠಾನ ಕಂಡಿಕೆ/2013-14 ದಿ: 15/10/2013.

ಈ ಆದೇಶದ ಲಗತಿಸಿದ ಪ್ರತಿಯನ್ನು ಈ ಕೆಳಕಂಡವರಿಗೆ ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ

ಉಪ ಕೃಷಿ ನಿರ್ದೇಶಕರು
(ಆಡಳಿತ)

ಇವರಿಗೆ,

ಉಪ ಕೃಷಿ ನಿರ್ದೇಶಕರು
(ತರಬೇತಿ)